# All India Radio: Bangalore
# Regional Bulletin In Kannada
# 16.11.2025 / 6.40 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

## 16.11.2025 / 6.40 p.m.

**<><><><>**

ಮುಖ್ಯಾಂಶಗಳು :

1. ನಾಳೆ ಪ್ರಧಾನಿ ನರೇಂದ್ರ ಮೋದಿ ಭೇಟಿಯಾಗಲಿರುವ ಮುಖ್ಯಮಂತ್ರಿ ಸಿದ್ಧರಾಮಯ್ಯ; ಕಬ್ಬು ಬೆಳೆಗಾರರ ಬೇಡಿಕೆ ಕುರಿತು ಚರ್ಚೆ
2. ಕೆಪಿಸಿಸಿ ಹುದ್ದೆಯ ಬಗ್ಗೆ ಹೈಕಮಾಂಡ್ ನಿರ್ಧಾರವೇ ಅಂತಿಮ - ಸಚಿವ ಸತೀಶ್ ಜಾರಕಿಹೊಳಿ
3. ಬೆಂಗಳೂರಿನಲ್ಲಿ ಸಂಸದ್ ಖೇಲ್ ಮಹೋತ್ಸವಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಚಾಲನೆ
4. ಕಲಬುರ್ಗಿಯ ಚಿತ್ತಾಪುರದಲ್ಲಿ ಶಾಂತಿಯುತವಾಗಿ ನಡೆದ ಆರ್‌ಎಸ್‌ಎಸ್ ಪಥ ಸಂಚಲನ
5. ನಾಳೆಯಿಂದ ಬೆಂಗಳೂರಿನ ಬಸವನಗುಡಿಯಲ್ಲಿ ೫ ದಿನಗಳ ಕಾಲ ಐತಿಹಾಸಿಕ ಕಡಲೆಕಾಯಿ ಪರಿಷೆ

<><><><>

ಮುಖ್ಯಮಂತ್ರಿ ಸಿದ್ಧರಾಮಯ್ಯ ಮತ್ತೆ ನಾಳೆ ದೆಹಲಿ ಪ್ರವಾಸ ಕೈಗೊಳ್ಳಲಿದ್ದಾರೆ. ಪ್ರಧಾನಿ ನರೇಂದ್ರಮೋದಿ ಭೇಟಿಗೆ ಸಮಯ ನಿಗದಿಯಾಗಿದ್ದು, ಮಹತ್ವದ ಚರ್ಚೆ ನಡೆಸಲಿದ್ದಾರೆ. ಕಬ್ಬು ಬೆಳೆಗಾರರ ಸಮಸ್ಯೆ ಸೇರಿದಂತೆ ರಾಜ್ಯಕ್ಕೆ ಸಂಬಂಧಪಟ್ಟ ಹಲವು ಅಭಿವೃದ್ಧಿ ವಿಚಾರಗಳ ಬಗ್ಗೆ ಪ್ರಧಾನಿ ಜೊತೆ ಸಮಾಲೋಚನೆ ನಡೆಸಲಿದ್ದಾರೆ. ಬೆಳಗಾವಿಯಲ್ಲಿ ಕಬ್ಬು ಬೆಳೆಗಾರರ ಪ್ರತಿಭಟನೆ ಸಂದರ್ಭದಲ್ಲಿ ಪ್ರಧಾನಿ ಭೇಟಿಗಾಗಿ ಮುಖ್ಯಮಂತ್ರಿ ಕಚೇರಿಯಿಂದ ಸಮಯ ಕೇಳಲಾಗಿತ್ತು. ಈ ಹಿನ್ನೆಲೆಯಲ್ಲಿ ನಾಳೆ ಸಂಜೆ ೫ ಗಂಟೆಗೆ ಸಮಯಾವಕಾಶ ನಿಗದಿಮಾಡಲಾಗಿದೆ. ಭೇಟಿ ವೇಳೆ ಕಬ್ಬು ಬೆಳೆಗಾರರ ಸಮಸ್ಯೆ, ಮಳೆಹಾನಿ ಪರಿಹಾರಕ್ಕೆ ನೆರವು ಹಾಗೂ ಬೆಂಗಳೂರು ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡುವಂತೆ ಮನವಿ ಸಲ್ಲಿಸುವ ಸಾಧ್ಯತೆ ಇದೆ.

<><><><>

ಕಾಂಗ್ರೆಸ್ ಪಕ್ಷದ ರಾಜ್ಯಾಧ್ಯಕ್ಷ ಹುದ್ದೆಯ ಬಗ್ಗೆ ಹೈಕಮಾಂಡ್ ನಿರ್ಧಾರ ಕೈಗೊಳ್ಳಲಿದೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೆಹಲಿಯಲ್ಲಿ ರಣದೀಪ್ ಸಿಂಗ್ ಸುರ್ಜೆವಾಲ ಅವರನ್ನು ಬೇಟಿ ಮಾಡಿದ್ದು, ರಾಜಕೀಯದ ಬಗ್ಗೆ ಯಾವುದೇ ಚರ್ಚೆ ನಡೆದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಈ ನಡುವೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಂಸದ ಡಿ.ಕೆ. ಸುರೇಶ್ ಸಂಪುಟ ಪುನರ್‌ರಚನೆ, ಅಧಿಕಾರ ಹಂಚಿಕೆ ಎಲ್ಲವನ್ನೂ ತೀರ್ಮಾನ ಮಾಡುವುದು ಹೈಕಮಾಂಡ್ ಎಂದು ಹೇಳಿದ್ದಾರೆ. ಸಚಿವ ಸಂಪುಟ ಪುನರ್‌ರಚನೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪರಮಾಧಿಕಾರ ಎಂದು ತಿಳಿಸಿದ್ದಾರೆ.

<><><>

ಬೆಂಗಳೂರಿನ ಪುಲಿಕೇಶಿ ನಗರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಹಮ್ಮಿಕೊಂಡಿದ್ದ ಸಂಸದ್ ಖೇಲ್ ಮಹೋತ್ಸವಕ್ಕೆ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ದೇಶದಲ್ಲಿ ೨೦೩೬ರಲ್ಲಿ ಒಲಿಂಪಿಕ್ಸ್ ಕ್ರೀಡಾಕೂಟ ನಡೆಯಲಿದ್ದು, ಕ್ರೀಡಾ ಕೂಟಕ್ಕೆ ಕ್ರೀಡಾಪಟುಗಳನ್ನು ಉತ್ತೇಜಿಸುವ ಉದ್ದೇಶದಿಂದ ಪ್ರತಿ ಲೋಕಸಭಾ ಕ್ಷೇತ್ರದಲ್ಲಿ ಸಂಸದ್ ಖೇಲ್ ಕ್ರೀಡಾಕೂಟ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದ್ದಾರೆ. ಪದಕ ಗೆಲ್ಲುವ ಹತ್ತು ಅಗ್ರ ಪದಕ ಪಟ್ಟಿ ದೇಶಗಳ ಸಾಲಿನಲ್ಲಿ ಭಾರತವೂ ಒಂದಾಗಬೇಕು ಎನ್ನುವುದು ಪ್ರಧಾನಿ ನರೇಂದ್ರ ಮೋದಿಯವರ ಸಂಕಲ್ಪವಾಗಿದೆ ಹೀಗಾಗಿ ಈ ಕ್ರೀಡಾಕೂಟ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದ್ದಾರೆ.

<><><><>

ಕಲಬುರಗಿ ಜಿಲ್ಲೆಯ ಚಿತ್ತಾಪುರದಲ್ಲಿ ಆರ್‌ಎಸ್‌ಎಸ್ ಪಥಸಂಚಲನ ಶಾಂತಿಯುತವಾಗಿ ನಡೆದಿದೆ. ಹೈಕೋರ್ಟ್ ಆದೇಶದಂತೆ ೩೦೦ ಮಂದಿ ಗಣವೇಷಧಾರಿಗಳು ಹಾಗೂ ೫೦ ಮಂದಿ ಬ್ಯಾಂಡ್ ವಾದಕರಿಗೆ ಮಾತ್ರ ಅವಕಾಶ ನೀಡಲಾಗಿತ್ತು. ಮಾರ್ಗಸೂಚಿ ಪ್ರಕಾರ ಆರ್‌ಎಸ್‌ಎಸ್ ಪಥಸಂಚಲನ ನಡೆದಿದೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕಲಬುರಗಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆರ್‌ಎಸ್‌ಎಸ್ ನೋಂದಣಿ ಆಗಿಲ್ಲ. ನೋಂದಣಿ ಆದರೆ ತೆರಿಗೆ ವ್ಯಾಪ್ತಿಗೆ ಬರಲಿದೆ ಎಂದು ಹೇಳಿದ್ದಾರೆ. ಕೆಕೆಆರ್‌ಡಿಬಿ ಹಣವನ್ನು ಕಲಬುರಗಿಯಲ್ಲಿ

ಆರ್ ಎಸ್ ಎಸ್ ಹೇಗೆ ದುರ್ಬಳಕೆ ಮಾಡಿಕೊಂಡಿದೆ ಎಂಬುದನ್ನು ದಾಖಲೆ ಸಮೇತ ಬಹಿರಂಗಪಡಿಸಲಾಗುವುದು ಎಂದು ತಿಳಿಸಿದ್ದಾರೆ.

<><><>

ಮಹಿಳೆಯರು ಸ್ವಾವಲಂಬಿಗಳಾಗಿ ತಮ್ಮ ಬದುಕು ರೂಪಿಸಿಕೊಳ್ಳುವಲ್ಲಿ ಸಹಕಾರಿ ಸಂಸ್ಥೆಗಳ ಪಾತ್ರ ಮಹತ್ತರವಾದುದು ಎಂದು ವಿಧಾನ ಸಭಾ ಅಧ್ಯಕ್ಷ ಯು.ಟಿ.ಖಾದರ್ ಅಭಿಪ್ರಾಯಪಟ್ಟಿದ್ದಾರೆ. ಅಖಿಲ ಭಾರತ ೭೧ ನೇ ಸಹಕಾರ ಸಪ್ತಾಹದ ಅಂಗವಾಗಿ ಮಂಗಳೂರಿನಲ್ಲಿಂದು ನಡೆದ ರಾಜ್ಯ ಮಟ್ಟದ ಸಹಕಾರ ಸಪ್ತಾಹ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸ್ವ ಸಹಾಯ ಸಂಘಗಳು ಮಹಿಳೆಯರ ಬದುಕಿನಲ್ಲಿ ಅಭೂತಪೂರ್ವ ಬದಲಾವಣೆ ತಂದಿವೆ. ಸಾವಿರಾರು ಮಹಿಳೆಯರು ಸ್ವಯಂ ಉದ್ಯಮ ಆರಂಭಿಸುವ ಮೂಲಕ ಹೊಸ ಬದಲಾವಣೆಗೆ ಕಾರಣರಾಗಿದ್ದಾರೆ ಎಂದು ಶ್ಲಾಘಿಸಿದ್ದಾರೆ. ಸಹಕಾರದಿಂದ ಮಾತ್ರ ಸ್ವಾವಲಂಬನೆ , ಗ್ರಾಮಗಳ ಅಭಿವೃದ್ಧಿಯಿಂದಷ್ಟೇ ದೇಶದ ಅಭಿವೃದ್ಧಿ ಸಾಧ್ಯ ಎಂದು ಹೇಳಿದ್ದಾರೆ. ಗ್ರಾಮಗಳ ಅಭಿವೃದ್ಧಿಗೆ ಸಹಕಾರ ಕ್ಷೇತ್ರದ ಕೊಡುಗೆ ಅಪಾರ ಎಂದು ತಿಳಿಸಿದ್ದಾರೆ.

<><><>

ಕಲಬುರಗಿ ಜಿಲ್ಲೆಯ ಎಲ್ಲಾ ಐದು ಹಾಗೂ ಯಾದಗಿರಿ ಜಿಲ್ಲೆಯ ಒಂದು ಸಕ್ಕರೆ ಕಾರ್ಖಾನೆಗಳು ಟನ್ ಕಬ್ಬಿಗೆ ೨ ಸಾವಿರದ ೬೫೦ ರೂಪಾಯಿಯಂತೆ ಕಬ್ಬು ಪೂರೈಸಿದ ೧೪ ದಿನಗಳೊಳಗಾಗಿ ನೀಡಲು ಒಪ್ಪಿದ್ದಾರೆ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕಲಬುರ್ಗಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಖ್ಯಮಂತ್ರಿಗಳು ಸಕ್ಕರೆ ಕಾರ್ಖಾನೆ ಮಾಲೀಕರು ಹಾಗೂ ಪ್ರತಿನಿಧಿಗಳೊಂದಿಗೆ ಚರ್ಚೆ ನಡೆಸಿದ ಬಳಿಕ ರೈತರ ಹಿತಾಸಕ್ತಿಯನ್ನು ಗಮನದಲ್ಲಿಟ್ಟುಕೊಂಡು ಕಬ್ಬಿನ ದರ ನಿಗದಿಪಡಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಬೆಳೆ ಹಾನಿಯಾದ ರೈತರ ವಿವರವನ್ನು ಈಗಾಗಲೇ ಪರಿಹಾರ ತಂತ್ರಾಂಶದಲ್ಲಿ ದಾಖಲಿಸಿದ್ದು, ಒಟ್ಟು ೩ ಲಕ್ಷದ ೨೭ ಸಾವಿರದ ೧೮೩ ರೈತರಿಗೆ ೨೫೦ ಕೋಟಿ ೬೭ ಲಕ್ಷ ರೂಪಾಯಿ ಬೆಳೆ ಹಾನಿ ಪರಿಹಾರವನ್ನು ಮುಂದಿನ ಮೂರ್ನಾಲ್ಕು ದಿನಗಳಲ್ಲಿ ರೈತರ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

<><><>

ಐತಿಹಾಸಿಕ ಬಸವನ ಗುಡಿ ಕಡಲೆಕಾಯಿ ಪರಿಷೆ ನಾಳೆಯಿಂದ ೫ ದಿನಗಳ ಕಾಲ ನಡೆಯಲಿದೆ. ಮುಖ್ಯಮಂತ್ರಿ ಸಿದ್ಧರಾಮಯ್ಯ, ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್, ಸಚಿವ ರಾಮಲಿಂಗಾ ರೆಡ್ಡಿ ಕಡಲೆಕಾಯಿ ಪರಿಷೆಗೆ ಚಾಲನೆ ನೀಡಲಿದ್ದಾರೆ. ಬಸವನ ಗುಡಿಯ ರಸ್ತೆಯ ಇಕ್ಕೆಲಗಳಲ್ಲಿ ಇಂದೇ ಕಡಲೆಕಾಯಿ ರಾಶಿ ಕಂಡು ಬರುತ್ತಿದೆ. ಇಂದು ರಜಾದಿನವಾದ ಹಿನ್ನೆಲೆಯಲ್ಲಿ ಇಂದಿನಿಂದಲೆ ಸಾವಿರಾರು ಮಂದಿ ಪರಿಷೆಗೆ ಆಗಮಿಸುತ್ತಿದ್ದಾರೆ. ನಾಳೆ ಆರಂಭವಾಗುವ ಪರಿಷೆ ಇದೇ ೨೧ರವರೆಗೆ ನಡೆಯಲಿದೆ. ಪ್ರತೀವರ್ಷ ಕಡಲೆಕಾಯಿ ಪರಿಷೆ ಕಾರ್ತಿಕ ಮಾಸದ ಕೊನೆ ಸೋಮವಾರ ನಡೆಯಲಿದೆ. ಸುಮಾರು ೫೦೦ ವರ್ಷಗಳ ಇತಿಹಾಸ ಹೊಂದಿರುವ ಬಹುದೊಡ್ಡ ಜಾತ್ರಾಮಹೋತ್ಸವ ಇದಾಗಿದೆ. ಜೊತೆಗೆ ಬೆಂಗಳೂರಿನ ಪರಂಪರೆ ನಂಬಿಕೆಯನ್ನು ಎತ್ತಿ ಹಿಡಿಯುವ ಹಬ್ಬ ಇದಾಗಿದೆ.

<><><>

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಿನಿಂದ ಅಭಿವೃದ್ಧಿ ಶೂನ್ಯವಾಗಿದ್ದು, ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಹದಗೆಟ್ಟಿದೆ ಎಂದು ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಚಾಮರಾಜನಗರದಲ್ಲಿ ಸ್ವಾತಂತ್ರ್ಯ ಹೋರಾಟಗಾರ ಬಿರ್ಸಾಮುಂಡಾ ಜಯಂತಿಯಲ್ಲಿ ಭಾಗವಹಿಸಿ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮುಂಬರುವ ಬೆಳಗಾವಿಯ ವಿಧಾನ ಮಂಡಲದ ಅಧಿವೇಶನದಲ್ಲಿ ರಾಜ್ಯಸರ್ಕಾರದ ವೈಫಲ್ಯದ ವಿರುದ್ಧ ಧ್ವನಿ ಎತ್ತಲಾಗುವುದು ಎಂದು ತಿಳಿಸಿದ್ದಾರೆ. ಉತ್ತರ ಕರ್ನಾಟಕದ ಸಮಸ್ಯೆಗಳನ್ನು ಬಗೆಹರಿಸುವುದಾಗಿ ಭರವಸೆ ನೀಡಿದ್ದ ಸರ್ಕಾರ ಇದುವರೆಗೂ ಈಡೇರಿಸಿಲ್ಲ ಎಂದು ದೂರಿದ್ದಾರೆ.

<><><>

ಮಹಾತ್ಮಾ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯ ಕಾಮಗಾರಿಗಳಲ್ಲಿ ಕೆಲಸ ಮಾಡುವ ಕಾರ್ಮಿಕರ ಹಾಜರಾತಿಯಲ್ಲಿ ಪಾರದರ್ಶಕತೆ ತರುವ ಉದ್ದೇಶದಿಂದ ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಇ-ಕೆವೈಸಿ ಕಾರ್ಯದಲ್ಲಿ ನರಗುಂದ ತಾಲೂಕು ಪಂಚಾಯತ್ ಗದಗ ಜಿಲ್ಲೆಯಲ್ಲಿ ಪ್ರಥಮ ಸ್ಥಾನ ಪಡೆದಿದೆ. ತಾಲೂಕಿನಲ್ಲಿ ಶೇಕಡಾ ೮೯.೭೬ ರಷ್ಟು ಸಾಧನೆ ಮಾಡುವುದರ ಮೂಲಕ ಜಿಲ್ಲೆಯಲ್ಲಿಯೇ ಅತೀ ಹೆಚ್ಚು ನರೇಗಾ ಸಕ್ರಿಯ ಕೂಲಿಕಾರರ ಇ-ಕೆವೈಸಿ ಮಾಡಿದ ಹೆಗ್ಗಳಿಕೆಗೆ ನರಗುಂದ ತಾಲೂಕು ಪಾತ್ರವಾಗಿದೆ. ನರಗುಂದ ತಾಲೂಕಿನಲ್ಲಿ ಒಟ್ಟು ೧೩ ಗ್ರಾಮ ಪಂಚಾಯತಿಗಳ ಪೈಕಿ ೧೯ ಸಾವಿರದ ೩೦೪ ಸಕ್ರಿಯ ನರೇಗಾ ಕಾರ್ಮಿಕರು ಇದ್ದಾರೆ.

<><><>

ಯುವನಿಧಿ ಯೋಜನೆಯಡಿ ನೊಂದಾಯಿಸಿಕೊಂಡು ಹಣ ಪಡೆಯುತ್ತಿರುವ ಫಲಾನುಭವಿಗಳು ಪ್ರತಿ ತ್ರೈಮಾಸಿಕ ಬದಲಾಗಿ ಇನ್ನೂ ಮುಂದೆ ಮಾಸಿಕ ನವೆಂಬರ್ ೧ ರಿಂದ ೨೫ನೇ ದಿನಾಂಕದೊಳಗಾಗಿ ಸ್ವಯಂ ಘೋಷಣೆ ಮಾಡಿಕೊಳ್ಳುವಂತೆ ವಿಜಯಪುರ ಜಿಲ್ಲಾ ಉದ್ಯೋಗಾಧಿಕಾರಿ ತಿಳಿಸಿದ್ದಾರೆ. ಯುವನಿಧಿ ಯೋಜನೆಯಡಿ ನೊಂದಣಿಯಾದ ಅಭ್ಯರ್ಥಿಗಳು ಕಡ್ಡಾಯವಾಗಿ ಸೇವಾಸಿಂಧು ಪೋರ್ಟಲ್‌ನಲ್ಲಿ ತಮ್ಮ ಅರ್ಜಿಯು ಯಾವ ಹಂತದಲ್ಲಿದೆ ಎಂಬುದನ್ನು ಪರಿಶೀಲಿಸಿಕೊಳ್ಳಬೇಕು ಎಂದು ಹೇಳಿದ್ದಾರೆ.

<><><>

ಅರಣ್ಯ ಭೂ ಒತ್ತುವರಿ ಸಂಬಂಧ ತನಿಖೆ ನಡೆಸಲು ಸುಪ್ರೀಂಕೋರ್ಟ್ ಆದೇಶದಂತೆ ವಿಶೇಷ ತನಿಖಾ ತಂಡ ರಚನೆ ಮಾಡಲಾಗಿದೆ ಎಂದು ಕೋಲಾರ ಅರಣ್ಯ ಉಪ ಸಂರಕ್ಷಣಾಧಿಕಾರಿ ಸರೀನಾ ಸಿಕ್ಕಲಿಗರ್ ತಿಳಿಸಿದ್ದಾರೆ. ಕೋಲಾರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲವರು ಈ ಕುರಿತಂತೆ ತಪ್ಪು ಸಂದೇಶ ನೀಡುತ್ತಿದ್ದಾರೆ ಎಂದು ದೂರಿದ್ದಾರೆ. ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಎಸ್‌ಐಟಿ ರಚನೆ ಮಾಡಲಾಗಿದ್ದು, ಜಿಲ್ಲಾಮಟ್ಟದಲ್ಲಿ ಜಿಲ್ಲಾಧಿಕಾರಿ ಅಧ್ಯಕ್ಷರಾಗಿದ್ದಾರೆ. ಭೂ ದಾಖಲೆಗಳಿಗೆ ಕಂದಾಯ ಇಲಾಖೆಯ ಮಾಲೀಕತ್ವ ಇರುವುದರಿಂದ ಜಿಲ್ಲಾಧಿಕಾರಿ ನೇತೃತ್ವದಲ್ಲಿ ಎಸ್‌ಐಟಿ ರಚನೆಯಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><><>

ಹುಬ್ಬಳ್ಳಿಯಲ್ಲಿ ನಡೆಯುತ್ತಿರುವ ಎಲೈಟ್ ಬಿ ಗುಂಪಿನ ರಣಜಿ ಪಂದ್ಯದಲ್ಲಿಂದು ಕರ್ನಾಟಕ ಚಂಡೀಗಡ ವಿರುದ್ಧ ದಿನದಾಟಕ್ಕೆ ೫ ವಿಕೆಟ್ ನಷ್ಟಕ್ಕೆ ೨೯೮ ರನ್ ಗಳಿಸಿದೆ. ಕರುಣ್ ನಾಯರ್, ಸ್ಮರಣ್ ರವಿಚಂದ್ರನ್ ಅಮೋಘ ಆಟದಿಂದ ಕರ್ನಾಟಕ ಉತ್ತಮ ರನ್ ಗಳಿಸುವತ್ತ ಹೆಜ್ಜೆ ಹಾಕಿದೆ. ಕರುಣ್ ನಾಯರ್ ೯೫ ರನ್ ಗಳಿಸಿ ಔಟಾಗಿದ್ದಾರೆ. ಸ್ಮರಣ್ ರವಿಚಂದ್ರನ್ ೧೧೦ ಹಾಗೂ ಶ್ರೇಯಸ್‌ಗೋಪಾಲ್ ೩೮ ರನ್‌ಗಳಿಸಿ ಅಜೇಯರಾಗಿ ಉಳಿದಿದ್ದಾರೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>